## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ತುಮಕೂರು ಇಲ್ಲಿನ ಬಿ.ಯು.ಎಂ.ಎಸ್. ಪದವಿ ಕೋರ್ಸಿನ ಪ್ರವೇಶ ಮಿತಿಯನ್ನು 2016–17ನೇ ಶೈಕ್ಷಣಿಕ ಸಾಲಿನಿಂದ ಹೆಚ್ಚಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಆಯುಷ್ ನಿರ್ದೇಶಕರ ಪ್ರಸ್ತಾವನೆ ಸಂಖ್ಯೆ:ಆಯುಷ್/120/ಅಭಿವೃದ್ಧಿ(3)/2014–15, ದಿನಾಂಕ: 23.11.2016.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ACA/AFF/UY-03/2016-17, ದಿನಾಂಕ:21.04.2016.
3. ಸರ್ಕಾರದ ಪತ್ರ ಸಂಖ್ಯೆ:ಆಕುಕ 169 ಪಿಟಿಡಿ 2016, ದಿನಾಂಕ:20.10.2016.
4. ಆಯುಷ್ ಮಂತ್ರಾಲಯದ ಪತ್ರ ಸಂಖ್ಯೆ:R.13012/01/2015-EP (IM-1), dated: 11.11.2016.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಸಂ (1)ರ ಪ್ರಸ್ತಾವನೆಯಲ್ಲಿ, ನಿರ್ದೇಶಕರು, ಆಯುಷ್ ಇಲಾಖೆ, ಬೆಂಗಳೂರು ಇವರು ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ತುಮಕೂರು ಇಲ್ಲಿನ ಬಿ.ಯು.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 2016–17ನೇ ಶೈಕ್ಷಣಿಕ ಸಾಲಿನಿಂದ 40 ರಿಂದ 60 ಕ್ಕೆ ಹೆಚ್ಚಿಸಿಕೊಳ್ಳಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಅಫಿಲಿಯೇಷನ್ ನೀಡಿದ್ದರ ಮೇರೆಗೆ ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಒದಗಿಸಲಾಗಿದ್ದು, ಪ್ರಸ್ತುತ ಕೇಂದ್ರ ಸರ್ಕಾರವು ಸದರಿ ಪ್ರವೇಶ ಮಿತಿ ಹೆಚ್ಚಳಕ್ಕೆ ಕೆಲವು ಷರತ್ತಿಗೊಳಪಟ್ಟು ಅನುಮತಿ ನೀಡಿರುತ್ತದೆ. ಅದರಂತೆ 2016–17ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಸಂ (2)ರ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ತುಮಕೂರು ಇಲ್ಲಿ 2016–17 ಮತ್ತು 2017–18ನೇ ಶೈಕ್ಷಣಿಕ ಸಾಲಿಗೆ ಬಿ.ಯು.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 40 ರಿಂದ 60 ಕ್ಕೆ ಹೆಚ್ಚಿಸಿಕೊಳ್ಳಲು ಅಫಿಲಿಯೇಷನ್ ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಸಂ (3)ರ ಸರ್ಕಾರದ ಪತ್ರದೊಂದಿಗೆ, ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ತುಮಕೂರು ಇಲ್ಲಿ 2016–17ನೇ ಶೈಕ್ಷಣಕ ಸಾಲಿನಿಂದ ಬಿ.ಯು.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 40 ರಿಂದ 60 ಸೀಟ್‌ಗಳಿಗೆ ಹೆಚ್ಚಿಸಲು ರಾಜ್ಯ ಸರ್ಕಾರದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಮೇಲೆ ಓದಲಾದ ಕ್ರಸಂ (4)ರ ಪತ್ರದಲ್ಲಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ತುಮಕೂರು ಇಲ್ಲಿ 2016–17ನೇ ಶೈಕ್ಷಣಿಕ ಸಾಲಿನಿಂದ ಬಿ.ಯು.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 40 ರಿಂದ 60 ಸೀಟ್‌ಗಳಿಗೆ ಹೆಚ್ಚಿಸಲು ಅನುಮತಿ ನೀಡಿರುತ್ತದೆ.

ಆಯುಷ್ ನಿರ್ದೇಶಕರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ತುಮಕೂರು ಇಲ್ಲಿ 2016–17ನೇ ಶೈಕ್ಷಣಿಕ ಸಾಲಿನಿಂದ ಬಿ.ಯು.ಎಂ.ಎಸ್. ಪದವಿ ಕೋರ್ಸ್‌ನ

. . . 2

ಪ್ರವೇಶಮಿತಿಯನ್ನು 40 ರಿಂದ 60 ಸೀಟ್‌ಗಳಿಗೆ ಹೆಚ್ಚಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 357 ಪಿಟಿಡಿ 2016, ಬೆಂಗಳೂರು, ದಿನಾಂಕ:30.12.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ತುಮಕೂರು ಇಲ್ಲಿ 2016–17ನೇ ಶೈಕ್ಷಣಿಕ ಸಾಲಿನಿಂದ ಬಿ.ಯು.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 40 ರಿಂದ 60 ಸೀಟ್‌ಗಳಿಗೆ ಹೆಚ್ಚಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶಮಿತಿ ಹೆಚ್ಚಿಸಲು ಭಾರತ ಸರ್ಕಾರ/ಸಿ.ಸಿ.ಐ.ಎಂ. ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಭಾರತ ಸರ್ಕಾರ/ಸಿ.ಸಿ.ಐ.ಎಂ. ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ಕೇಂದ್ರ/ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ಸಿ.ಜಗದೀಶ)
ಸರ್ಕಾರದ ಉಪ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

**ಇವರಿಗೆ:**

1) Secretary to Government, Ministry of AYUSH, AYUSH Bhawan, B.Block, GPO Complex, New Delhi-110 023. (R.12011/06/2015-EP (IM-1).
2) ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು–09.
3) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4) ಪ್ರಾಚಾರ್ಯರು, ಹೆಚ್.ಎಂ.ಎಸ್. ಯುನಾನಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಸದಾಶಿವನಗರ, 2ನೇ ಹಂತ, ರಿಂಗ್ ರೋಡ್, ಮರಳೂರು ಅಂಚೆ, ತುಮಕೂರು–572 105.

**ಪ್ರತಿಗಳು:–**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು–1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ–3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.